# Akashvani : Bangalore
# National Bulletin In Kannada
# 01.06.2024 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಏಳನೇ ಹಾಗೂ ಅಂತಿಮ ಹಂತದ ಲೋಕಸಭಾ ಚುನಾವಣೆ ಮುಕ್ತಾಯ; ಸಂಜೆ ೫ ಗಂಟೆ ವೇಳೆಗೆ ಶೇಕಡ ೫೮.೩೪ ರಷ್ಟು ಮತದಾನ

೨. ಲೋಕಸಭಾ ಚುನಾವಣೆ ಮತ ಎಣಿಕೆ ಹಿನ್ನೆಲೆ; ದೆಹಲಿಯಲ್ಲಿ ಐಎನ್‌ಡಿಐಎ ಒಕ್ಕೂಟದ ಸಭೆಯಲ್ಲಿ ಫಲಿತಾಂಶ ಕುರಿತು ಚರ್ಚೆ

೩. ತೈವಾನ್ ಅಥ್ಲೆಟಿಕ್ಸ್ ಓಪನ್‌ನ ಟೂರ್ನಿಯ ಜಾವೆಲಿನ್ ಎಸೆತದಲ್ಲಿ ಭಾರತದ ಡಿ.ಪಿ.ಮನುಗೆ ಚಿನ್ನದ ಪದಕ

೪. ಟಿ-೨೦ ವಿಶ್ವಕಪ್; ಭಾರತ - ಬಾಂಗ್ಲಾದೇಶ ನಡುವೆ ಇಂದು ಅಭ್ಯಾಸ ಪಂದ್ಯ; ನಾಳೆಯಿಂದ ಟೂರ್ನಿ ಆರಂಭ

<><*<><>*><>

೨೦೨೪ರ ಲೋಕಸಭಾ ಚುನಾವಣೆಯ ಮತದಾನ ಇಂದು ಪೂರ್ಣಗೊಂಡಿದೆ. ಏಳನೇ ಹಾಗೂ ಅಂತಿಮ ಹಂತದಲ್ಲಿ ಇಂದು ಏಳು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡಿಗಢ ಸೇರಿದಂತೆ ಒಟ್ಟು ೫೭ ಲೋಕಸಭಾ ಕ್ಷೇತ್ರಗಳಲ್ಲಿ ಚುನಾವಣೆ ನಡೆಯಿತು. ಐದು ಗಂಟೆಯ ವೇಳೆಗೆ ಒಟ್ಟಾರೆ ಶೇಕಡ ೫೮.೩೪ ರಷ್ಟು ಮತದಾನವಾಗಿದೆ. ಬಿಹಾರದಲ್ಲಿ ಶೇಕಡ ೪೮.೮೬, ಚಂಡೀಗಢದಲ್ಲಿ ೬೨, ಹಿಮಾಚಲಪ್ರದೇಶದಲ್ಲಿ ೬೬, ಜಾರ್ಖಂಡ್‌ನಲ್ಲಿ ೬೮, ಒಡಿಶಾದಲ್ಲಿ ೬೮, ಪಂಜಾಬ್‌ನಲ್ಲಿ ೫೫, ಉತ್ತರ ಪ್ರದೇಶದಲ್ಲಿ ೫೪ ಹಾಗೂ ಪಶ್ಚಿಮಬಂಗಾಳದಲ್ಲಿ ಶೇಕಡ ೭೦ ರಷ್ಟು ಮತದಾನವಾಗಿರುವ ಕುರಿತು ವರದಿಯಾಗಿದೆ. ಈ ಹಂತದಲ್ಲಿ ಉತ್ತರ ಪ್ರದೇಶ ಮತ್ತು ಪಂಜಾಬ್‌ನಲ್ಲಿ ತಲಾ ೧೩, ಪಶ್ಚಿಮ ಬಂಗಾಳದಲ್ಲಿ ೯, ಬಿಹಾರದಲ್ಲಿ ೮, ಒಡಿಶಾದಲ್ಲಿ ೬, ಹಿಮಾಚಲ ಪ್ರದೇಶದಲ್ಲಿ ೪, ಜಾರ್ಖಂಡ್‌ನಲ್ಲಿ ೩ ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡೀಗಢದ ೧ ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಿತು. ೯೦೪ ಅಭ್ಯರ್ಥಿಗಳು ಈ ಹಂತದಲ್ಲಿ ಸ್ಪರ್ಧಿಸಿದ್ದಾರೆ. ಈ ಹಂತದಲ್ಲಿ ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ, ಸ್ಪರ್ಧಿಸಿರುವ ವಾರಾಣಸಿಯಲ್ಲೂ ಮತ ನಡೆಯಿತು. ಬಿಜೆಪಿ ನಾಯಕರಾದ ಅನುರಾಗ್ ಸಿಂಗ್ ಠಾಕೂರ್, ರವಿಶಂಕರ್ ಪ್ರಸಾದ್, ಕಾಂಗ್ರೆಸ್ ನಾಯಕರಾದ ಮನೀಷ್ ತಿವಾರಿ, ವಿಕ್ರಮಾಧಿತ್ಯ ಸಿಂಗ್, ಆರ್‌ಜೆಡಿ ನಾಯಕಿ ಮಿಸಾ ಭಾರತಿ, ತೃಣಮೂಲ ಕಾಂಗ್ರೆಸ್ ಮುಖಂಡ ಅಭಿಷೇಕ್ ಬ್ಯಾನರ್ಜಿ ಈ ಹಂತದಲ್ಲಿ ಸ್ಪರ್ಧಿಸಿರುವ ಪ್ರಮುಖರಾಗಿದ್ದಾರೆ.

ಎಲ್ಲಾ ಹಂತಗಳ ಸಾರ್ವತ್ರಿಕ ಚುನಾವಣೆಯ ಮತ ಎಣಿಕೆ ಕಾರ್ಯ ಈ ತಿಂಗಳ ೪ರಂದು ಮಂಗಳವಾರ ನಡೆಯಲಿದೆ. ಒಡಿಶಾದ ೪೨ ವಿಧಾನಸಭಾ ಕ್ಷೇತ್ರಗಳಿಗೂ ಇಂದು ಮತದಾನ ನಡೆಯಿತು.

<><*<><>*><>

ಲೋಕಸಭಾ ಚುನಾವಣೆಯ ಮತ ಎಣಿಕೆಗೂ ಮುನ್ನ ಪ್ರತಿಪಕ್ಷಗಳ ಒಕ್ಕೂಟ, ಐಎನ್‌ಡಿಐಎ ಇಂದು ದೆಹಲಿಯಲ್ಲಿ ಸಭೆ ನಡೆಸಿ ೨೯೫ ಕ್ಕೂ ಹೆಚ್ಚು ಕ್ಷೇತ್ರಗಳನ್ನು ವಿಶ್ವಾಸವನ್ನು ವ್ಯಕ್ತಪಡಿಸಿದೆ. ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಚುನಾವಣೆಗಳು ಮತ್ತು ಮುಂಬರುವ ಸಂಭಾವ್ಯ ಸವಾಲುಗಳ ಸೇರಿದಂತೆ ಅನೇಕ ವಿಷಯಗಳ ಬಗ್ಗೆ ಇಂದಿನ ಸಭೆಯಲ್ಲಿ ಚರ್ಚಿಸಲಾಯಿತು. ಅಲ್ಲದೆ, ಮತ ಎಣಿಕೆ ದಿನ ಪ್ರತಿಪಕ್ಷಗಳು ಅನುಸರಿಸಬೇಕಾದ ಮುನ್ನೆಚ್ಚರಿಕೆಗಳ ಬಗ್ಗೆಯೂ ಚರ್ಚಿಸಲಾಯಿತು. ಇಂದು ಮಾಧ್ಯಮಗಳಲ್ಲಿ ಪ್ರಸಾರವಾಗುವ ಮತಗಟ್ಟೆ ಸಮೀಕ್ಷಾ ಚರ್ಚೆಗಳಲ್ಲಿ ಪಾಲ್ಗೊಳ್ಳಲು ಪ್ರತಿಪಕ್ಷಗಳು ತೀರ್ಮಾನಿಸಿವೆ ಎಂದು ಹೇಳಿದರು. ಇದಕ್ಕೂ ಮುನ್ನ ಮತಗಟ್ಟೆ ಸಮೀಕ್ಷೆಗಳ ಚರ್ಚೆಗಳನ್ನು ಬಹಿಷ್ಕರಿಸಲು ಕಾಂಗ್ರೆಸ್ ತೀರ್ಮಾನಿಸಿತ್ತು. ಆಮ್ ಆದ್ಮಿ ಪಕ್ಷದ ಸಂಚಾಲಕ ಹಾಗೂ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, ಸಭೆಯ ನಂತರ ಮಾತನಾಡಿ, ಕೇಂದ್ರದಲ್ಲಿ ಬಲಿಷ್ಠ ಸರ್ಕಾರ ರಚಿಸುವತ್ತ ಐಎನ್‌ಡಿಐಎ ಒಕ್ಕೂಟ ಮುಂದೆ ಸಾಗುತ್ತಿದೆ ಎಂದರು. ಸಮಾಜವಾದಿ ಪಕ್ಷದ ವರಿಷ್ಠ ಅಖಿಲೇಶ್ ಯಾದವ್ ಮಾತನಾಡಿ, ಉತ್ತರ ಪ್ರದೇಶದಲ್ಲಿ ಐಎನ್‌ಡಿಐಎ ಒಕ್ಕೂಟ ಬಹುತೇಕ ಸ್ಥಾನಗಳನ್ನು ಗೆಲ್ಲಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಐಎನ್‌ಡಿಐಎ ಒಕ್ಕೂಟ ಜಯ ಸಾಧಿಸುವ ವಿಶ್ವಾಸವನ್ನು ಸಿಪಿಎಂ ಪ್ರಧಾನ ಕಾರ್ಯದರ್ಶಿ ಸೀತಾರಾಮ್ ಯಚೂರಿ ವ್ಯಕ್ತಪಡಿಸಿದರು. ಸಭೆಯಲ್ಲಿ ಕಾಂಗ್ರೆಸ್‌ನ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ, ಕೆ.ಸಿ.ವೇಣುಗೋಪಾಲ್, ಆಮ್ ಪಕ್ಷದ ನಾಯಕ ಹಾಗೂ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್, ಜಾರ್ಖಂಡ್ ಮುಖ್ಯಮಂತ್ರಿ ಚಂಪೈ ಸೊರೆನ್, ಎನ್‌ಸಿಪಿ ಶರದ್ ಪವಾರ್, ನ್ಯಾಷನಲ್ ಕಾನ್ಫರೆನ್ಸ್‌ನ ಫಾರುಕ್ ಅಬ್ದುಲ್ಲಾ, ಆರ್‌ಜೆಡಿ ನಾಯಕ ತೇಜಸ್ವಿ ಯಾದವ್, ಸಿಪಿಐನ ಡಿ.ರಾಜ, ಡಿಎಂಕೆಯ ಟಿ.ಆರ್.ಬಾಲು, ಪಾಲ್ಗೊಂಡಿದ್ದರು.

<><*<><>*><>

ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ೩೭೦ ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದ್ದು, ಎನ್‌ಡಿಎ ಒಕ್ಕೂಟ ೪೦೦ ಕ್ಕೂ ಅಧಿಕ ಕ್ಷೇತ್ರಗಳಲ್ಲಿ ಜಯ ಸಾಧಿಸಲಿದೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಈ ಚುನಾವಣೆಯಲ್ಲಿ ದೇಶದ ಜನರು ತುಷ್ಟೀಕರಣ, ಸ್ವಜನಪಕ್ಷಪಾತ ಮತ್ತು ಭ್ರಷ್ಟಾಚಾರದ ರಾಜಕೀಯವನ್ನು ತಿರಸ್ಕರಿಸಲಿದ್ದು, ಸಬಲೀಕರಣ, ಅಭಿವೃದ್ಧಿ ಮತ್ತು ಸ್ವಾವಲಂಬಿ ಭಾರತದ ಕಲ್ಪನೆಯನ್ನು ಬೆಂಬಲಿಸಲಿದ್ದಾರೆ ಎಂದು ಅವರು ಹೇಳಿದ್ದಾರೆ. ಚುನಾವಣೆಯಲ್ಲಿ ಶ್ರಮಿಸಿದ ಬಿಜೆಪಿ ಕಾರ್ಯಕರ್ತರು ಮತ್ತು ಎನ್‌ಡಿಎ ಮಿತ್ರಪಕ್ಷಗಳನ್ನು ಪ್ರಶಂಸಿದ ಅವರು ಸೂಕ್ತ ವ್ಯವಸ್ಥೆಗಳೊಂದಿಗೆ ಚುನಾವಣೆಯನ್ನು ಯಶಸ್ವಿಯಾಗಿ ನಡೆಸಿದ ಚುನಾವಣಾ ಆಯೋಗಕ್ಕೆ ಕೃತಜ್ಞತೆ ಸಲ್ಲಿಸಿದ್ದಾರೆ.

<><*<><>*><>

ಪಶ್ಚಿಮ ಬಂಗಾಳ ಮತ್ತು ತೆಲಂಗಾಣ ಸೇರಿದಂತೆ ದೇಶದ ಈಶಾನ್ಯ ಭಾಗಗಳಲ್ಲಿ ರೆಮಲ್ ಚಂಡಮಾರುತದಿಂದ ಉಂಟಾದ ಪ್ರಾಣಹಾನಿ ಮತ್ತು ಆಸ್ತಿ ನಷ್ಟಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಉಪರಾಷ್ಟ್ರಪತಿ ಜಗದೀಪ್ ಧನಕರ್ ಇಂದು ಸಂತಾಪ ಸೂಚಿಸಿದ್ದಾರೆ. ರೆಮಲ್ ಚಂಡಮಾರುತದಿಂದ ಉಂಟಾದ ಸಾವು ನೋವು ಮತ್ತು ಆಸ್ತಿ-ಪಾಸ್ತಿ ನಷ್ಟದಿಂದ ತಮಗೆ ನೋವಾಗಿದ್ದು, ಪ್ರಕೃತಿ ವಿಕೋಪದಿಂದ ಸಂತ್ರಸ್ತರಾದವರ ಜೊತೆ ದೇಶ ನಿಂತಿದೆ ಎಂದು ರಾಷ್ಟ್ರಪತಿ ಹೇಳಿದ್ದಾರೆ. ರಕ್ಷಣಾ ಮತ್ತು ಪರಿಹಾರ ಕಾರ್ಯಗಳಿಗೆ ಯಶಸ್ಸಿಗೆ ಪ್ರಾರ್ಥಿಸಿರುವ ಅವರು, ಪರಿಸ್ಥಿತಿಯು ಬೇಗನೆ ಸಹಜ ಸ್ಥಿತಿಗೆ ಮರಳುವ ಆಶಯ ವ್ಯಕ್ತಪಡಿಸಿದ್ದಾರೆ.

**<><*<><>*><>**

ವಾಯುವ್ಯ ಮತ್ತು ಮಧ್ಯ ಭಾರತದಲ್ಲಿ ತೀವ್ರ ತಾಪಮಾನ ಕಡಿಮೆಯಾಗುವ ನಿರೀಕ್ಷೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಈ ಪ್ರದೇಶಗಳಲ್ಲಿ ಗರಿಷ್ಠ ತಾಪಮಾನವು ಒಂದರಿಂದ ಮೂರು ಡಿಗ್ರಿ ಸೆಲ್ಸಿಯಸ್‌ನಷ್ಟು ಕಡಿಮೆಯಾಗುವ ಸಾಧ್ಯತೆಯಿದೆ, ಆದರೂ, ಪಂಜಾಬ್, ಹರಿಯಾಣ, ದೆಹಲಿ, ರಾಜಸ್ಥಾನ ಮತ್ತು ಮಧ್ಯಪ್ರದೇಶದ ಅಲ್ಲಲ್ಲಿ ಹಾಗೂ ಒಡಿಶಾ, ಬಿಹಾರ, ಜಾರ್ಖಂಡ್ ಸೇರಿದಂತೆ ಪೂರ್ವ ಭಾಗಗಳಲ್ಲಿ ಬಿಸಿಗಾಳಿ ವಾತಾವರಣ ಮುಂದುವರೆಯಲಿದೆ.

**<><*<><>*><>**

ಕೇರಳದ ಉತ್ತರ ಭಾಗಗಳಲ್ಲಿ ನಿನ್ನೆ ಸಂಜೆಯಿಂದ ಭಾರೀ ಮಳೆ ಸುರಿಯುತ್ತಿದ್ದು, ಹಲವೆಡೆ ಜನಜೀವನ ಅಸ್ತವ್ಯಸ್ತವಾಗಿದೆ. ಭಾರಿ ಮಳೆಯಾಗುವ ಹಿನ್ನೆಲೆಯಲ್ಲಿ ಇಡುಕ್ಕಿ, ತ್ರಿಶೂರ್, ಪಾಲಕ್ಕಾಡ್, ಮಲಪ್ಪುರಂ, ಕೊಜಿಕ್ಕೋಡ್ ಮತ್ತು ವಯನಾಡ್ ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ತಿರುವನಂತಪುರ ಮತ್ತು ಕೊಲ್ಲಂ ಹೊರತುಪಡಿಸಿ ಉಳಿದ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

**<><*<><>*><>**

ಸಿಂಗಾಪುರ ಓಪನ್ ಬ್ಯಾಡ್ಮಿಂಟನ್‌ನ ಮಹಿಳೆಯರ ಡಬಲ್ಸ್ ಸೆಮಿಫೈನಲ್‌ನಲ್ಲಿ ಭಾರತದ ಜೋಡಿ ಟ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಟೂರ್ನಿಯಿಂದ ಹೊರಬಿದ್ದಿದ್ದಾರೆ. ವಿಶ್ವದ ೩೦ನೇ ಶ್ರೇಯಾಂಕದ ಭಾರತದ ಈ ಜೋಡಿ ಇಂದು ನಡೆದ ಪಂದ್ಯದಲ್ಲಿ ಜಪಾನ್‌ನ ನಮಿ ಮತ್ಸುಯಾಮಾ ಹಾಗೂ ಚಿಹಾರು ಶಿದಾ ವಿರುದ್ಧ ೨೩-೨೧, ೨೧-೧೧ ಅಂತರದಿಂದ ಪರಾವಗೊಂಡರು. ನಿನ್ನೆ ನಡೆದ ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಜೋಡಿ ಕಿಮ್ ಸೋ ಯೊಂಗ್ ಮತ್ತು ಕಾಂಗ್ ಹೀ ಯೋಂಗ್ ವಿರುದ್ಧ ಗೆದ್ದಿದ್ದರು.

**<><*<><>*><>**

ತೈವಾನ್ ಅಥ್ಲೆಟಿಕ್ಸ್ ಓಪನ್‌ನ ಜಾವೆಲಿನ್ ಎಸೆತದಲ್ಲಿ, ಭಾರತದ ಡಿ.ಪಿ.ಮನು ಇಂದು ೮೧.೫೮ ಮೀಟರ್ ದೂರ ಎಸೆದು ಚಿನ್ನದ ಪದಕವನ್ನು ಪಡೆದಿದ್ದಾರೆ. ಚೈನೀಸ್ ತೈಪೆಯ ಚಾವೊ ತ್ಸುನ್ ಚೆಂಗ್ ೭೬.೨೧ ಮೀಟರ್ ಎಸೆದು ಬೆಳ್ಳಿ ಗೆದ್ದರೆ, ಅದೇ ದೇಶದ ಚಾವೊ-ಹಾಂಗ್ ಹುವಾಂಗ್ ೭೧.೨೪

ಮೀಟರ್ ಎಸೆದು ಕಂಚಿನ ಪದಕ ಪಡೆದರು. ಜಾವೆಲಿನ್ ಎಸೆತದಲ್ಲಿ ಭಾಗವಹಿಸಿರುವ ೧೨ ಸ್ಪರ್ಧಿಗಳ ಪೈಕಿ ಡಿ.ಪಿ.ಮನು ಏಕಮಾತ್ರ ವಿದೇಶಿ ಅಥ್ಲೀಟ್ ಆಗಿದ್ದಾರೆ.

<><*<><>*><>

ಚುನಾವಣಾ ಆಯೋಗದ ನಿರ್ದೇಶನಗಳನ್ನು ಉಲ್ಲಂಘಿಸಿದ ಕಾರಣಕ್ಕೆ ಪಂಜಾಬ್‌ನ ಫಿರೋಜ್‌ಪುರ ಲೋಕಸಭಾ ಕ್ಷೇತ್ರದ ಬಿಎಸ್‌ಪಿ ಅಭ್ಯರ್ಥಿ ಸುರೀಂದರ್ ಸಿಂಗ್ ಕಾಂಬೋಜ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಗುರು ಹರ್‌ಸಹಾಯ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಜಿವಾ ಅರೈ ಗ್ರಾಮದಲ್ಲಿ ತಾವು ಮತ ಚಲಾಯಿಸುತ್ತಿರುವುದನ್ನು ವೀಡಿಯೋ ರೆಕಾರ್ಡ್ ಮಾಡಿದ್ದಕ್ಕಾಗಿ ಸುರೀಂದರ್ ಕಾಂಬೋಜ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

<><*<><>*><>

ಪೂರ್ವ ಅಫ್ಘಾನಿಸ್ತಾನದ ನಂಗರ್‌ಹಾರ್ ಪ್ರಾಂತ್ಯದಲ್ಲಿಂದು ನದಿಯಲ್ಲಿ ದೋಣಿ ಮುಳುಗಿ ಕನಿಷ್ಠ ೨೦ ಮಂದಿ ಮೃತಪಟ್ಟಿದ್ದಾರೆ. ಮೊಮಂಡ್ ದಾರಾ ಜಿಲ್ಲೆಯ ಬಸಾವುಲ್ ಪ್ರದೇಶದ ನದಿಯಲ್ಲಿ ಬೆಳಿಗ್ಗೆ ೭ ಗಂಟೆಗೆ ಮಹಿಳೆಯರು ಮತ್ತು ಮಕ್ಕಳಿದ್ದ ದೋಣಿ ಮುಳುಗಿದೆ. ಐವರನ್ನು ರಕ್ಷಿಸಲಾಗಿದ್ದು, ಐದು ಮೃತದೇಹಗಳನ್ನು ಹೊರತೆಗೆಯಲಾಗಿದೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

<><*<><>*><>

ಅಮೆರಿಕದ ನ್ಯೂಯಾರ್ಕ್‌ನ ನಾಸೌದ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ಭಾರತ ಮತ್ತು ಬಾಂಗ್ಲಾದೇಶ ನಡುವೆ ಟಿ-೨೦ ಅಭ್ಯಾಸ ಪಂದ್ಯ ನಡೆಯಲಿದೆ. ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಪಂದ್ಯ ಆರಂಭವಾಗಲಿದೆ. ಟಿ-೨೦ ವಿಶ್ವಕಪ್ ನಾಳೆಯಿಂದ ಆರಂಭವಾಗಲಿದ್ದು, ಮೊದಲ ಪಂದ್ಯದಲ್ಲಿ ಆತಿಥೇಯ ಅಮೆರಿಕ ಮತ್ತು ಕೆನಡಾ ತಂಡಗಳು ಮುಖಾಮುಖಿಯಾಗಲಿದೆ. ಭಾರತ ತಂಡವು ಜೂನ್ ೫ ರಂದು ಐರ್ಲೆಂಡ್ ವಿರುದ್ಧ ಕಣಕ್ಕಿಳಿಯುವ ಮೂಲಕ ವಿಶ್ವಕಪ್ ಅಭಿಯಾನ ಶುರು ಮಾಡಲಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ ಕ್ಕೆ **<>*><>**